ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 20/11/20

# ರಾಜ್ಯದಲ್ಲಿ 50 ಲಕ್ಷ ಉದ್ಯೋಗ ಸೃಷ್ಟಿ ಗುರಿ

**ಬೆಂಗಳೂರು:** ಮುಂದಿನ ಐದು ವರ್ಷಗಳಲ್ಲಿ ಸರ್ಕಾರ ರಾಜ್ಯದಲ್ಲಿ 50 ಲಕ್ಷ ಉದ್ಯೋಗ ಸೃಷ್ಟಿ ಮಾಡುವ ಗುರಿ ಹೊಂದಿದೆ. ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು. ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಗುರುವಾರ ಬಿಟಿಎಸ್ 2020 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಐಟಿ ಬಿಟಿ ಕ್ಷೇತ್ರದಲ್ಲಿ ಕರ್ನಾಟಕ ಮುಂಚೂಣಿಯಲ್ಲಿದ್ದು ಹೊಸ ಆವಿಷ್ಕಾರಗಳೊಂದಿಗೆ ಹೆಜ್ಜೆಯಿಡಲು ಸಂಕಲ್ಪ ಹೊಂದಲಾಗಿದೆ ಎಂದರು. ಪ್ರಧಾನಿ ಮೋದಿಯವರ ಡಿಜಿಟಲ್ ಇಂಡಿಯಾ ಕನಸನ್ನು ಸಾಕಾರಗೊಳಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ನುಡಿದರು.

ಈ ತಂತ್ರಜ್ಞಾನ ಶೃಂಗಸಭೆಯಲ್ಲಿ 25 ದೇಶಗಳ 250ಕ್ಕೂ ಹೆಚ್ಚು ಕಂಪನಿಗಳು ಮತ್ತು ಸಾವಿರಾರು ಉದ್ಯಮಿಗಳು ವರ್ಚುಯಲ್ ತಂತ್ರಜ್ಞಾನದ ಮೂಲಕ ಪಾಲ್ಗೊಳ್ಳುತ್ತಿದ್ದು, ಮೊದಲ ದಿನ ಏಳು ಒಪ್ಪಂದಗಳಿಗೆ ಸಹಿ ಹಾಕಲಾಗುತ್ತಿದ್ದು, ಎರಡನೇ ದಿನ 13 ಒಪ್ಪಂದಗಳಿಗೆ ಸಹಿ ಹಾಕಲಾಗುವುದು ಎಂದು ತಿಳಿಸಿದರು. ಕೊರೊನಾ ಸಾಂಕ್ರಾಮಿಕದ ಕಾರಣದಿಂದಾಗಿ ಕಾರ್ಯಕ್ರಮವನ್ನು ಡಿಜಿಟಲ್ ಆವೃತ್ತಿಯ ಮೂಲಕ ಆಯೋಜಿಸಲಾಗುತ್ತಿದೆ.

ಕರ್ನಾಟಕ ಹೂಡಿಕೆದಾರರನ್ನು ಆಕರ್ಷಿಸಲು ಎಲ್ಲ ರೀತಿಯ ಕ್ರಮ ಕೈಗೊಂಡಿದ್ದು 2025 ರ ಹೊತ್ತಿಗೆ ಭಾರತದಲ್ಲೇ ಮೊದಲ ಸ್ಥಾನ ಪಡೆಯುವ ಗುರಿ ಹೊಂದಲಾಗಿರುವುದಾಗಿ ತಿಳಿಸಿದರು. ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ಕರ್ನಾಟಕ ಈಗಾಗಲೇ ಮೊದಲ ಸ್ಥಾನದಲ್ಲಿದ್ದು, 2020 ರಲ್ಲಿ ಉದ್ಯಮಿಗಳನ್ನು ಆಕರ್ಷಿಸುವ ನಿಟ್ಟಿನಲ್ಲಿ ಕರ್ನಾಟಕ ಕಾರ್ಮಿಕ ತಿದ್ದುಪಡಿ ಕಾಯ್ದೆ, ಭೂಸುಧಾರಣಾ ಕಾಯಿದೆ ತಿದ್ದುಪಡಿಗಳ ಮೂಲಕ ಬೃಹತ್ ಹೆಜ್ಜೆ ಇಟ್ಟಿರುವುದಾಗಿ ನುಡಿದರು.

ಉಪಮುಖ್ಯಮಂತ್ರಿ ಡಾ. ಅಶ್ವತ್ಥ ನಾರಾಯಣ್, ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್, ಶಾಸಕ ರಿಜ್ವಾನ್ ಅರ್ಷದ್, ಆಸ್ಟ್ರೇಲಿಯಾದ ಪ್ರಧಾನಿ ಸ್ಕಾಟ್ ಮಾರಿಸನ್, ಸ್ವಿಜರ್‌ಲ್ಯಾಂಡ್ ಉಪಾಧ್ಯಕ್ಷ ಗೈ ಪರ್ಮ್ಲಿನ್, ಬಯೋಕಾನ್ ಮುಖ್ಯಸ್ಥೆ ಕಿರಣ್ ಮಜುಮ್ದಾರ್, ಕೇಂದ್ರ ಸಚಿವ ರವಿಶಂಕರ್ ಸೇರಿದಂತೆ ಹಲವರು ವರ್ಚುಯಲ್ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.




ಬೆಂಗಳೂರು ಟೆಕ್ ಶೃಂಗಸಭೆ 2020 ಕಾರ್ಯಕ್ರಮಕ್ಕೆ ಸಿಎಂ ಯಡಿಯೂರಪ್ಪ ಗುರುವಾರ ಚಾಲನೆ ನೀಡಿದರು. ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್, ಐಟಿಬಿಟಿ ಸಚಿವ ಡಾ.ಅಶ್ವತ್ಥ್ ನಾರಾಯಣ್ ಮತ್ತು ಶಾಸಕ ರಿಜ್ವಾನ್ ಅರ್ಷದ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಭವಿಷ್ಯ ಈಗಲೇ (ನೆಕ್ಸ್ಟ್ ಈಸ್ ನೌ) ಎಂಬ ಶೀರ್ಷಿಕೆಯಡಿ ಪ್ರಾರಂಭವಾಗಿರುವ ಬಿಟಿಎಸ್ 2020 ಶೃಂಗಸಭೆಯಲ್ಲಿ ತಂತ್ರಜ್ಞಾನ ಕ್ಷೇತ್ರದಲ್ಲಿ ಪ್ರಖ್ಯಾತರಾಗಿರುವ 25 ದೇಶಗಳ ವರ್ಚುಯಲ್ ಮೂಲಕ ಪಾಲ್ಗೊಳ್ಳಲಿದ್ದಾರೆ. ಮೂರುದಿನಗಳ ಕಾಲ ನಡೆಯಲಿರುವ ಈ ತಂತ್ರಜ್ಞಾನ ಶೃಂಗಸಭೆಯಲ್ಲಿ ಕೃತಕ ಬುದ್ಧಿಮತ್ತೆ, ವಿದ್ಯುತ್ ಚಾಲಿತವಾಹನಗಳು ಮತ್ತು ಕೃಷಿ, ಶಿಕ್ಷಣ, ಆರೋಗ್ಯ ಕ್ಷೇತ್ರಗಳಲ್ಲಿ ತಂತ್ರಜ್ಞಾನದ ಬಳಕೆಯ ಕುರಿತು ಚರ್ಚೆ ನಡೆಯಲಿದೆ. ವೆಬ್‌ಸೈಟ್ ಮೂಲಕ ನೋಂದಣಿ ಮಾಡಿಕೊಂಡಿರುವ ಹೂಡಿಕೆದಾರರು, ತಂತ್ರಜ್ಞರು ವರ್ಚುಯಲ್ ಆಗಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ.